# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\152\2014\ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 28.9.2016

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ

ವಿಷಯ: ಸರ್ಕಾರಿ ನೌಕರರಾದ ಶ್ರೀ.ವೆಂಕಟರಾಜ, ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕರ್ತವ್ಯ ಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

*******

ಶ್ರೀಮತಿ.ನಮಿತ ಕೋಂ ಮುನಿರಾಜು ಮರಳುಬಾಗಿಲು ಹರಿಜನ ಕಾಲೋನಿ, 12ನೇ ವಾರ್ಡ್ ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ.ವೆಂಕಟರಾಜ, ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ ಎದುರುದಾರ ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಗ್ರಾಮದ ಸ. ನಂ: 193 ಕ್ಷೇತ್ರ 1ಎ., ಜಮೀನು ಸರ್ಕಾರದಿಂದ ದೂರುದಾರರ ಗಂಡ ಮುನಿರಾಜು ತಂದೆ ಮುನಿವೆಂಕಟಪ್ಪ ಇವರಿಗೆ ಮಂಜೂರಾಗಿದ್ದು ಇರುತ್ತದೆ. ಆದರೆ ಈ ಜಮೀನು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರಿಡಾಂಗಣಕ್ಕೆ ಸ್ವಾಧೀನ ಪಡಿಸಿಕೊಂಡು ದೂರುದಾರರಿಗೆ ಬದಲಿ ಜಮೀನು ನೀಡುವುದಾಗಿ ಸರ್ಕಾರದವರು ಹೇಳಿ ನಂತರ ಯಾವುದೇ ಜಮೀನು ಲಭ್ಯವಿರುವುದಿಲ್ಲ ಅಂತ ಎದುರುದಾರರು ತಮಗೆ ಬದಲಿ ನಿವೇಶನ ನೀಡಿರುವುದಿಲ್ಲವೆಂದು ದೂರು ನೀಡಿದ್ದಾರೆ.

3) ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರ 1ಎ., ಜಮೀನನ್ನು ಕ್ರಿಢಾಂಗಣಕ್ಕಾಗಿ ಸರ್ಕಾರ ಸ್ವಾಧಿನಪಡಿಸಿಕೊಂಡಿರುವುದು ನಿಜವಿರುತ್ತದೆ. ಆದರೆ ದೂರುದಾರರಿಗೆ ಬದಲಿ ನಿವೇಶನ ನೀಡುವ ಸಂಬಂಧ ಆರ್.ಐ ರವರಿಂದ ಜಮೀನು ಲಭ್ಯತೆಬಗ್ಗೆ ಪರಿಶೀಲಿಸಿ ವರದಿ ಕೇಳಿದ್ದು ಅವರು ಯಾವುದೇ ಜಮೀನು ಲಭ್ಯವಿರುವುದಿಲ್ಲವೆಂದು ವರದಿ ನೀಡಿರುತ್ತಾರೆ. ಸರ್ಕಾರಿ ಸುತ್ತೋಲೆ ಪ್ರಕಾರ ರಾಜ್ಯ ಪತ್ರ ಸಂ: 33/ಎಲ್.ಜಿ.ಪಿ 2007 ದಿ: 25.1.2008 ಆದೇಶದಂತೆ ದೇವನಹಳ್ಳಿ ತಾಲ್ಲೂಕಿನಲ್ಲಿ ಜಮೀನು ಮಂಜೂರು ಮಾಡಲು ಅಧಿಕಾರ ಇರುವುದಿಲ್ಲ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4) ದೂರುದಾರರು ತಮ್ಮ ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಅ) "ದೂರುದಾರರ ಗಂಡನಿಗೆ ದೇವನ ಹಳ್ಳಿ ಗ್ರಾಮದ ಸ. ನಂ:193 ಕ್ಷೇತ್ರ 1ಎ., ಜಮೀನು ಸರ್ಕಾರದಿಂದ ಮಂಜೂರಾಗಿತ್ತು ಎನ್ನುವುದನ್ನು ಎದುರುದಾರರು ಒಪ್ಪಿಕೊಂಡಿರುತ್ತಾರೆ. ಆದರೆ ದೇವನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕ್ರೀಢಾಂಗಣಕ್ಕೆ ದೂರುದಾರರು ಜಮೀನು ಅನುಕೂಲವಿರುವುದರಿಂದ ಅದನ್ನು ಸ್ವಾಧೀನಪಡಿಸಿಕೊಂಡು ದೂರುದಾರರಿಗೆ ಬದಲಿ ಜಮೀನು ಕೊಡತಕ್ಕದ್ದು ಅಂತ ಉಪ ವಿಭಾಗಾಧಿಕಾರಿಗಳು ದೊಡ್ಡಬಳ್ಳಾಪುರ ಪ್ರಕರಣ ಸಂ: ಎಂ.ಎನ್.ಡಿ ಆರ್.ಯು.ಸಿ (ಎ) 21/1998-99 ರಲ್ಲಿ ಆದೇಶ ಮಾಡಿರುತ್ತಾರೆ. ಆ ಆದೇಶದ ಪ್ರಕಾರ ಎದುರುದಾರರು ದೂರುದಾರರಿಗೆ ಬದಲಿ ಜಮೀನನ್ನು ದೇವನ ಹಳ್ಳಿ ಗ್ರಾಮದಲ್ಲಿ ಲಭ್ಯವಿದ್ದ ಕಡೆ ನೀಡುವುದು ಅವರ ಕರ್ತವ್ಯವಾಗಿರುತ್ತದೆ.

ಆ) ಎದುರುದಾರರು ಆರ್.ಐ ರವರ ವರದಿಯ ಮೇರೆಗೆ ಯಾವುದೇ ಜಮೀನು ಲಭ್ಯವಿಲ್ಲದ ಕಾರಣ ದೂರುದಾರರಿಗೆ ಜಮೀನು ಕೊಡಲಾಗುವುದಿಲ್ಲ ಹಾಗೂ ರಾಜ್ಯ ಪತ್ರ ಸಂ: 33/ಎಲ್.ಜಿ.ಪಿ 2007 ದಿ: 25.1.2008 ಆದೇಶದಂತೆ ದೇವನಹಳ್ಳಿ ತಾಲ್ಲೂಕಿನಲ್ಲಿ ಜಮೀನು

**ಮಂಜೂರು ಮಾಡುವ ಅಧಿಕಾರವಿರುವುದಿಲ್ಲವೆಂದು ತಿಳಿಸಿದ್ದಾರೆ. ದೂರುದಾರರ ಜಮೀನನ್ನು ಸರ್ಕಾರ ಸ್ವಾಧೀನಪಡಿಸಿಕೊಂಡು ಅವರಿಗೆ ಬದಲಿ ಜಮೀನು ಯಾವುದೋ ಕಾರಣ ನೀಡಿ ಜಮೀನನ್ನು ನೀಡದಿದ್ದರೆ ಅವರಿಗೆ ಅನ್ಯಾಯವಾಗುತ್ತದೆ. ಒಂದು ವೇಳೆ ಜಮೀನು ಲಭ್ಯವಿಲ್ಲದಿದ್ದರೆ ಅವರ ಜಮೀನಿಗೆ ಮಾರುಕಟ್ಟೆಧರದಲ್ಲಿ ಪರಿಹಾರವನ್ನಾದರೂ ನೀಡಬೇಕಾಗುತ್ತದೆ. ಈ ರೀತಿ ಕ್ರಮಕೈಗೊಳ್ಳುವ ಜವಾಬ್ದಾರಿ ಎದುರುದಾರರ ಮೇಲೆ ಇರುತ್ತದೆ. ಆದರೆ ಎದುರುದಾರರು ಇದನ್ನು ಸರ್ಮಪಕವಾಗಿ ನಿಭಾಯಿಸದೆ ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.**

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

7. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

8. ಎದುರುದಾರರು ಸಾರ್ವಜನಿಕ/ ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1) (i) ಮತ್ತು (ii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಭಂಧ ಮತ್ತು ಮೇಲ್ಮನವಿ) ನಿಯಮಗಳು 1957ರ

57

ನಿಯಮ 14–ಎ ರಡಿಯಲ್ಲಿ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆಯನ್ನು ಈ ಪ್ರಾಧಿಕಾರಕ್ಕೆ ವಹಿಸ ಬೇಕೆಂದೂ ಕೋರಿದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 28/9/16.

[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.